# All India Radio: Bangalore
# Regional Bulletin In Kannada
# 15.05.2026 / 2.30 p.m.

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

## 15.05.2026 / 2.30 p.m.

<><><><>

ಮುಖ್ಯಾಂಶಗಳು

1. ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ ; ಮುಖ್ಯಮಂತ್ರಿ ಸಿದ್ದರಾಮಯ್ಯ ಖಂಡನೆ
2. ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ; ಭವಿಷ್ಯದಲ್ಲಿ ಕಂಪ್ಯೂಟರ್ ಆಧಾರಿತ ಪರೀಕ್ಷೆ ನಡೆಸಲು ಕೇಂದ್ರ ಸರ್ಕಾರ ನಿರ್ಧಾರ
3. ರಾಜ್ಯದಲ್ಲಿ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ; ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅಸಮಾಧಾನ
4. ರಾಜ್ಯದ ಉಪವಿಭಾಗಾಧಿಕಾರಿಗಳ ಜೊತೆ ಸಚಿವ ಕೃಷ್ಣ ಬೈರೇಗೌಡ ಪ್ರಗತಿ ಪರಿಶೀಲನಾ ಸಭೆ
5. ಶಾಲೆಗಳಲ್ಲಿ ಹಿಜಾಬ್ ಧರಿಸಲು ಅವಕಾಶ ; ಸರ್ಕಾರದ ವಿರುದ್ಧ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಟೀಕೆ

<><><><>

ಜಾಗತಿಕ ಇಂಧನ ಬೆಲೆ ಏರಿಕೆ ನಡುವೆ ತೈಲ ಕಂಪನಿಗಳು ಪೆಟ್ರೋಲ್ ಮತ್ತು ಡೀಸೆಲ್ ಬೆಲೆಯನ್ನು ಲೀಟರ್‌ಗೆ ತಲಾ ೩ ರೂಪಾಯಿಗಳಷ್ಟು ಹೆಚ್ಚಿಸಿವೆ. ಪೆಟ್ರೋಲ್ ಬೆಲೆ ಲೀಟರ್‌ಗೆ ೯೪ ರೂಪಾಯಿ ೭೭ ಪೈಸೆಯಿಂದ ೯೭ ರೂಪಾಯಿ ೭೭ ಪೈಸೆಗೆ ಹೆಚ್ಚಳವಾಗಿದೆ. ಇದೇ ವೇಳೆ ಇಂದ್ರಪ್ರಸ್ಥ ಗ್ಯಾಸ್ ಲಿಮಿಟೆಡ್, ಸಿಎನ್‌ಜಿ ಬೆಲೆಯನ್ನು ೨ ರೂಪಾಯಿಗಳಷ್ಟು ಹೆಚ್ಚಿಸಿದೆ. ಪರಿಷ್ಕೃತ ದರ ಇಂದು ರಾತ್ರಿಯಿಂದ ಜಾರಿಗೆ ಬರಲಿದೆ. ಈ ಕುರಿತಂತೆ ಪ್ರತಿಕ್ರಿಯಿಸಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ ಪ್ರಧಾನಿ ನರೇಂದ್ರ ಮೋದಿ ಅವರು ಜನರಿಗೆ ನೀಡಿದ ಉಡುಗೊರೆ ಎಂದು ತಿಳಿಸಿದ್ದಾರೆ. ದೇಶದ ಆರ್ಥಿಕ ಸಂಕಷ್ಟಕ್ಕೆ ಕೇವಲ ಆರ್ಥಿಕ ಬಿಕ್ಕಟ್ಟು ಕಾರಣವಲ್ಲ. ಕೇಂದ್ರ ಸರ್ಕಾರದ ದೂರದೃಷ್ಟಿಯ ಕೊರತೆ ಮತ್ತು ಅಸಮರ್ಥತೆ ಕಾರಣ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

<><><>

ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಖಂಡಿಸಿದ್ದಾರೆ. ಇದು ಜನ ಸಾಮಾನ್ಯರ ಮೇಲೆ ಪ್ರಭಾವ ಬೀರಲಿದೆ ಎಂದು ಕೇಂದ್ರ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ವಿಶೇಷವಾಗಿ ರೈತರು ಹಾಗೂ ಬಡವರು ಬೆಲೆ ಏರಿಕೆಯಿಂದ ತತ್ತರಿಸಲಿದ್ದಾರೆ. ಗ್ಯಾಸ್ ಸಿಲಿಂಡರ್ ದರ ಏರಿಕೆಯಿಂದ ಆಹಾರ ಪದಾರ್ಥಗಳ ಬೆಲೆ ಏರಿಕೆಯಾಗಿದೆ ಎಂದು ಕೇಂದ್ರ ಸರ್ಕಾರದ ನಿರ್ಧಾರವನ್ನು ಖಂಡಿಸಿದ್ದಾರೆ. ಇದೇ ವೇಳೆ ರಾಜ್ಯದಲ್ಲಿ ಮತಪಟ್ಟಿ ಪರಿಷ್ಕರಣೆ ಕುರಿತಂತೆ ಪ್ರತಿಕ್ರಿಯಿಸಿದ ಅವರು, ಚುನಾವಣಾ ಆಯೋಗ ಎಸ್ಐಆರ್ ನಡೆಸಿದರೆ ನಾವು ಈ ಬಗ್ಗೆ ತಯಾರಿ ನಡೆಸುವುದಾಗಿ ತಿಳಿಸಿದ್ದಾರೆ.

<><><>

ಜೂನ್ ೨೧ರಂದು ನೀಟ್ ಯುಜಿ ೨೦೨೬ರ ಮರುಪರೀಕ್ಷೆ ನಡೆಯಲಿದೆ ಎಂದು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ತಿಳಿಸಿದ್ದಾರೆ. ನವದೆಹಲಿಯಲ್ಲಿ ಮಾತನಾಡಿದ ಅವರು, ಮುಂದಿನ ವರ್ಷದಿಂದ ನೀಟ್ ಯುಜಿ ಪರೀಕ್ಷೆಯನ್ನು ಕಂಪ್ಯೂಟರ್ ಆಧಾರಿತ ಪರೀಕ್ಷೆ - ಸಿಬಿಟಿ ವಿಧಾನದಲ್ಲಿ ನಡೆಸಲಾಗುವುದು ಎಂದು ಮಾಹಿತಿ ನೀಡಿದ್ದಾರೆ. ಜೂನ್ ೨೧ರಂದು ನಡೆಯುವ ಮರುಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು ಜೂನ್ ೧೪ರೊಳಗೆ ತಮ್ಮ ಪ್ರವೇಶ ಪತ್ರಗಳನ್ನು ಪಡೆಯಬೇಕು ಎಂದು ತಿಳಿಸಿದ್ದಾರೆ. ಪರೀಕ್ಷಾ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಮತ್ತು ನಂಬಿಕೆಯನ್ನು ಮರುಸ್ಥಾಪಿಸಲು ಸರ್ಕಾರ ಬದ್ಧವಾಗಿದೆ ಎಂದು ಪುನರುಚ್ಚರಿಸಿದ್ದಾರೆ.

<><><>

ರಾಜ್ಯದಲ್ಲಿ ಚುನಾವಣಾ ಆಯೋಗ ನಡೆಸಲು ಉದ್ದೇಶಿಸಿರುವ ವಿಶೇಷ ಮತಪಟ್ಟಿ ಪರಿಷ್ಕರಣೆ ಕುರಿತಂತೆ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಸ್ಐಆರ್ ಬಗ್ಗೆ ಹಲವು ಅನುಮಾನಗಳಿದ್ದು, ಉದ್ದೇಶ ಪೂರ್ವಕವಾಗಿ ಮತದಾರರ ಪಟ್ಟಿಯಿಂದ ಕೆಲವರ ಹೆಸರನ್ನು ಕಿತ್ತು ಹಾಕಲಾಗುತ್ತಿದೆ ಎಂದು ಆರೋಪಿಸಿದ್ದಾರೆ.

**ಧ್ವನಿ : ಡಾ.ಜಿ.ಪರಮೇಶ್ವರ್**

<><><>

ಬಿಡದಿ ಟೌನ್‌ಶಿಪ್ ಯೋಜನೆಯನ್ನು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಮರ್ಥಿಸಿಕೊಂಡಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಮ್ಮ ಸರ್ಕಾರ ಒಳ್ಳೆಯ ಕೆಲಸ ಮಾಡಿದರೂ, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ವಿರೋಧ ಮಾಡುತ್ತಾರೆ. ಅವರು ಮಾಡಿದ ಯೋಜನೆಯನ್ನೇ ನಾವು ಮುಂದುವರಿಸಿರುವುದು ಎಂದು ತಿಳಿಸಿದ್ದಾರೆ. ಇದೇ ವೇಳೆ ಬೆಂಗಳೂರು ನಗರವನ್ನು ನಾಗರಿಕರು ಸ್ವಚ್ಛವಾಗಿಡಬೇಕು ಎಂದು ಉಪಮುಖ್ಯಮಂತ್ರಿ ಕರೆ ನೀಡಿದ್ದಾರೆ.

<><><><>

ಶಾಲೆಗಳಲ್ಲಿ ಹಿಜಾಬ್‌ಗೆ ಅವಕಾಶ ನೀಡಿರುವ ಸರ್ಕಾರದ ನಿರ್ಧಾರದ ವಿರುದ್ಧ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅಸಮಧಾನ ವ್ಯಕ್ತಪಡಿಸಿದ್ದಾರೆ. ಮುಂದಿನ ದಿನಗಳಲ್ಲಿ ಧರ್ಮದ ಆಧಾರದಲ್ಲಿ ಶಾಲೆಗಳಲ್ಲಿ ಭೇದ-ಭಾವ ಉಂಟಾದರೆ ಸರ್ಕಾರವೇ ನೇರ ಹೊಣೆ ಎಂದು ತಿಳಿಸಿದ್ದಾರೆ. ಈ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿರುವ ಅವರು, ರಾಜ್ಯ ಸರ್ಕಾರ ಶಿಕ್ಷಣ ವ್ಯವಸ್ಥೆಯನ್ನು ಸಂಪೂರ್ಣವಾಗಿ ಹದಗೆಡಿಸಿದೆ ಎಂದು ದೂರಿದ್ದಾರೆ. ಅಂತಾರಾಷ್ಟ್ರೀಯ ಮಟ್ಟದಲ್ಲಿಯೇ ಹೆಣ್ಣು ಮಕ್ಕಳು ಹಿಜಾಬ್ ತೊರೆದಿದ್ದು, ರಾಜ್ಯದಲ್ಲಿ ಹೆಣ್ಣುಮಕ್ಕಳಿಗೆ ಹಿಜಾಬ್‌ಗೆ ಅವಕಾಶ ನೀಡಿರುವುದು ಅತ್ಯಂತ ಬೇಜವಾಬ್ದಾರಿಯ ನಿರ್ಣಯ ಎಂದು ಅಭಿಪ್ರಾಯಪಟ್ಟಿದ್ದಾರೆ.

<><><><>

ಅಭಿಮಾನಿ ಕೊಲೆ ಪ್ರಕರಣದಲ್ಲಿ ನಟ ದರ್ಶನ್‌ಗೆ ಜಾಮೀನು ನೀಡಲು ಸುಪ್ರೀಂಕೋರ್ಟ್ ನಿರಾಕರಿಸಿದೆ. ಸಾಧ್ಯವಾದರೆ ದಿನಂಪ್ರತಿ ೭೦ ಪ್ರಮುಖ ಸಾಕ್ಷಿಗಳ ವಿಚಾರಣೆ ನಡೆಸಿ ಒಂದು ವರ್ಷದೊಳಗೆ ವಿಚಾರಣಾ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕು ಎಂದು ಸೂಚಿಸಿದೆ. ಮುಂದಿನ ಒಂದು ವರ್ಷದಲ್ಲಿ ವಿಚಾರಣೆಯಲ್ಲಿ ಯಾವುದೇ ಪ್ರಗತಿಯಾಗದಿದ್ದಲ್ಲಿ ಮತ್ತೊಮ್ಮೆ ಜಾಮೀನಿಗೆ ಅರ್ಜಿ ಸಲ್ಲಿಸಬಹುದು ಎಂದು ನ್ಯಾಯಾಲಯ ತಿಳಿಸಿದೆ. ಅರ್ಜಿದಾರರಿಗೆ ಜೈಲಿನ ನಿಯಮದ ಅನುಸಾರ ಇತರ ವಿಚಾರಣಾಧೀನ ಖೈದಿಯಂತೆ ಸೌಕರ್ಯಗಳನ್ನು ಒದಗಿಸಬೇಕು ಎಂದು ನಿರ್ದೇಶನ ನೀಡಿದೆ.

<><><><>

ವಿಜಯಪುರ ಜಿಲ್ಲೆಯ ಅಲಮೇಲು ತಾಲೂಕಿನ ಮೊರಟಗಿ ಗ್ರಾಮದಲ್ಲಿ ನಿನ್ನೆ ಸುರಿದ ಭಾರೀ ಮಳೆಗೆ ಮನೆಯ ಮೇಲ್ಛಾವಣಿ ಕುಸಿದು ಒಂದೇ ಕುಟುಂಬದ ನಾಲ್ವರು ಸಾವನ್ನಪ್ಪಿದ್ದಾರೆ. ಸ್ವಂತ

ಮನೆ ದುರಸ್ತಿ ಕಾರ್ಯ ನಡೆಯುತ್ತಿದ್ದ ಹಿನ್ನೆಲೆಯಲ್ಲಿ ಈ ಕುಟುಂಬವು ಬಾಡಿಗೆಗೆ ಹಳೆಯ ಮನೆಯಲ್ಲಿ ವಾಸಿಸುತ್ತಿತ್ತು. ಆದರೆ ಕಳೆದ ರಾತ್ರಿ ಸುರಿದ ಬಿರುಗಾಳಿ ಸಹಿತ ಮಳೆಗೆ ಮನೆ ಕುಸಿದು ಬಿದ್ದಿದ್ದು, ನಾಲ್ವರು ಸಾವನ್ನಪ್ಪಿದ್ದಾರೆ. ಸುದ್ದಿ ತಿಳಿದ ತಕ್ಷಣ ಅಗ್ನಿಶಾಮಕ ದಳದ ಸಿಬ್ಬಂದಿ, ಪೊಲೀಸರು ಸ್ಥಳಕ್ಕೆ ಧಾವಿಸಿ ರಕ್ಷಣಾ ಕಾರ್ಯಚರಣೆ ನಡೆಸಿ ಅವಷೇಶಗಳನ್ನು ತೆರವುಗೊಳಿಸಿದ್ದಾರೆ.

<><><>

ದಾವಣಗೆರೆ ಜಿಲ್ಲಾದ್ಯಂತ ಮುಂಗಾರು ಪೂರ್ವ ಮಳೆ ಚುರುಕುಗೊಂಡಿದ್ದು, ನಿನ್ನೆ ಸಂಜೆ ಸುರಿದ ಗುಡುಗು ಸಹಿತ ಮಳೆಯ ವೇಳೆ ಸಿಡಿಲು ಬಡಿದು ಕುರಿಕಾಯುತ್ತಿದ್ದ ಯುವಕನೊಬ್ಬ ಮುದಹದಡಿ ಗ್ರಾಮದ ಹೊರವಲಯದಲ್ಲಿ ಸಾವನಪ್ಪಿದ್ದಾನೆ. ಮುಂಗಾರು ಪೂರ್ವ ಮಳೆಯಿಂದಾಗಿ ಜಿಲ್ಲೆಯಾದ್ಯಂತ ಕೃಷಿ ಚಟುವಟಿಕೆಗಳು ಚುರುಕುಗೊಂಡಿವೆ. ಮಾಯಕೊಂಡ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬಿರುಗಾಳಿ ಸಹಿತ ಮಳೆಗೆ ತೋಟಗಾರಿಕೆ ಬೆಳೆಗಳು ಹಾನಿಗೊಂಡಿದ್ದು, ಶಾಸಕ ಕೆ.ಎಸ್.ಬಸವಂತಪ್ಪ ಹಾನಿಗೊಳಗಾದ ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

<><><>

ಚಿಕ್ಕಮಗಳೂರು ಜಿಲ್ಲೆಯ ಮಲೆನಾಡು ಭಾಗದ ಕೊಪ್ಪ, ಶೃಂಗೇರಿ, ಖಾಂಡ್ಯ, ಎನ್.ಆರ್ ಪುರ ಹಾಗು ಮೂಡಿಗೆರೆ, ತರೀಕೆರೆ ಭಾಗಗಳಲ್ಲಿ ಕಾಡು ಕೋಣಗಳ ಹಾವಳಿ ಹೆಚ್ಚಾಗಿದೆ. ಬೆಳೆ ಹಾನಿ ಜೊತೆಗೆ ಮನುಷ್ಯರ ಮೇಲೂ ದಾಳಿ ನಡೆಸುತ್ತಿರುವ ಪ್ರಕರಣಗಳು ಹೆಚ್ಚಾದ ಹಿನ್ನೆಲೆಯಲ್ಲಿ ಕಾಡುಕೋಣಗಳ ಸೆರೆಗೆ ರಾಜ್ಯ ಸರ್ಕಾರ ಆದೇಶ ನೀಡಿದೆ. ಕೊಪ್ಪ ತಾಲೂಕಿನಲ್ಲಿ ಕಾಡುಕೋಣಗಳ ಸೆರೆ ಕಾರ್ಯಾಚರಣೆ ಆರಂಭವಾಗಿದ್ದು, ಅರಣ್ಯಧಿಕಾರಿಗಳು, ಸಿಬ್ಬಂದಿ ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದಾರೆ. ವನ್ಯ ಜೀವಿ ಅಧಿಕಾರಿ ಕುಮಾರ್ ಪುಷ್ಕರ್ ಹಾಗೂ ಇತರೆ ಹಿರಿಯ ಅರಣ್ಯಧಿಕಾರಿಗಳ ನೇತೃತ್ವದಲ್ಲಿ ಕಾರ್ಯಾಚರಣೆ ನಡೆಯುತ್ತಿದ್ದು ೨೦ಕ್ಕೂ ಹೆಚ್ಚು ಅರಣ್ಯ ಇಲಾಖೆ ಸಿಬ್ಬಂದಿ, ೬ ಮಂದಿ ವೈದ್ಯಾಧಿಕಾರಿಗಳು ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದಾರೆ.

<><><>

ಆಕಾಶವಾಣಿ ೯೦ ರ ವರ್ಷಾಚರಣೆ ಅಂಗವಾಗಿ ಕಾರವಾರ ಆಕಾಶವಾಣಿ ಹಾಗೂ ರೋಟರಿ ಕ್ಲಬ್ ಮತ್ತು ಅವರ್ ಸೋಷಿಯಲ್ ಗುಡ್ ಸಹಯೋಗದಲ್ಲಿ ಇಂದು ಬೆಳಗ್ಗೆ ಕಾರವಾರದ ರವೀಂದ್ರನಾಥ ಟಾಗೋರ್ ಕಡಲತೀರದಿಂದ ಆಕಾಶವಾಣಿ ಕಚೇರಿಯವರೆಗೆ ವಾಕಥಾನ್-೨೦೨೬ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಕಾರವಾರದ ಅವರ್ ಸೋಷಿಯಲ್ ಗುಡ್ ಸಂಸ್ಥೆಯ

ಪವನ್ ಸಾವಂತ್, ಬ್ರಹ್ಮಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯದ ಜಿಲ್ಲಾ ಸಂಯೋಜಕಿ ಬಿ.ಕೆ.ಕವಿತಾ ಹಾಗೂ ಆಕಾಶವಾಣಿ ಕಾರವಾರ ಕೇಂದ್ರದ ಕಾರ್ಯಕ್ರಮ ಮುಖ್ಯಸ್ಥ ಟಿ.ಶ್ಯಾಮ ಪ್ರಸಾದ್ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಆಕಾಶವಾಣಿ ಕಾರವಾರದ ಸಿಬ್ಬಂದಿ, ಸಾರ್ವಜನಿಕರು ಸೇರಿದಂತೆ ನೂರಾರು ಸಂಖ್ಯೆಯಲ್ಲಿ ಜನರು ನಡಿಗೆಯಲ್ಲಿ ಭಾಗವಹಿಸಿದರು. ಕಾರ್ಯಕ್ರಮದ ಕೊನೆಗೆ ಭಾಗವಹಿಸಿದ ಪ್ರತಿಯೊಬ್ಬರಿಗೂ ಪ್ರಮಾಣ ಪತ್ರ ವಿತರಿಸಲಾಯಿತು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>